# ಕರ್ನಾಟಕ ವಿಧಾನ ಪರಿಷತ್ತು

**ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1326**
**ಮಾನ್ಯ ಸದಸ್ಯರ ಹೆಸರು : ಡಾ.ಧನಂಜಯ ಸರ್ಜಿ (ಪದವೀಧರರ ಕ್ಷೇತ್ರ)**
**ಉತ್ತರಿಸಬೇಕಾದ ದಿನಾಂಕ : 17.12.2025**
**ಉತ್ತರಿಸಬೇಕಾದ ಸಚಿವರು : ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು.**

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಪಶು ವೈದ್ಯರ ತೀವ್ರ ಕೊರತೆಯಿಂದಾಗಿ ಸಾರ್ವಜನಿಕರು /ರೈತರಿಗೆ ತೀವ್ರ ಸಮಸ್ಯೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ. |
| ಆ) | ರಾಜ್ಯದಲ್ಲಿ ಒಟ್ಟು ಎಷ್ಟು ಪಶು ವೈದ್ಯರ ಹುದ್ದೆಗಳು ಖಾಲಿಯಿವೆ; ಕಳೆದ 4 ವರ್ಷದಿಂದ 400 ಪಶು ವೈದ್ಯರ ನೇಮಕಾತಿ ಅಧಿಸೂಚನೆ ಹೊರಡಿಸಿದ್ದರೂ ಪ್ರಕ್ರಿಯೆ ಆರಂಭಿಸದಿರಲು ನಿಖರ ಕಾರಣವೇನು; | ರಾಜ್ಯದಲ್ಲಿ ಒಟ್ಟು-1057 ಪಶುವೈದ್ಯರ ಹುದ್ದೆಗಳು ಖಾಲಿ ಇರುತ್ತದೆ.<br><br>ಪಶುವೈದ್ಯಾಧಿಕಾರಿ ಹುದ್ದೆಯ ನೇರ ನೇಮಕಾತಿಗೆ ಸಂಬಂಧಪಟ್ಟಂತೆ ಮಾನ್ಯ ಕರ್ನಾಟಕ ರಾಜ್ಯ ಆಡಳಿತ ನ್ಯಾಯಮಂಡಳಿ ಮತ್ತು ಕರ್ನಾಟಕ ಉಚ್ಚ ನ್ಯಾಯಾಲಯದಲ್ಲಿ ಪ್ರಕರಣಗಳು ದಾಖಲಾಗಿದ್ದ ಹಿನ್ನಲೆಯಲ್ಲಿ ಹಾಗೂ ನೇರ ನೇಮಕಾತಿಯಲ್ಲಿ ಪರಿಶಿಷ್ಟ ಪಂಗಡದ ಒಳ ಮೀಸಲಾತಿ ಪ್ರಕ್ರಿಯೆ ಜಾರಿಯಲ್ಲಿದ್ದ ಕಾರಣ ನೇಮಕಾತಿಯಲ್ಲಿ ವಿಳಂಭವಾಗಿರುತ್ತದೆ.<br><br>ಪ್ರಸ್ತುತ 400 ಪಶುವೈದ್ಯಾಧಿಕಾರಿ ಹುದ್ದೆಗಳಿಗೆ ನೇರ ನೇಮಕಾತಿ ಮುಖೇನ ಭರ್ತಿ ಮಾಡಲು ಕರ್ನಾಟಕ ಲೋಕಸೇವಾ ಆಯೋಗಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲಾಗಿದ್ದು ನೇಮಕಾತಿ ಪ್ರಕ್ರಿಯೆ ಚಾಲ್ತಿಯಲ್ಲಿರುತ್ತದೆ. |
| ಇ) | ಈ ಹುದ್ದೆಗಳಿಗೆ ಸಂದರ್ಶನ ಇಲ್ಲ ಎಂದು ಇಲಾಖೆ ಮತ್ತು ಡಿಪಿಎಆರ್ ಸ್ಪಷ್ಟಪಡಿಸಿದ್ದರೂ ಕರ್ನಾಟಕ ಲೋಕಸೇವಾ ಆಯೋಗ ಸಂದರ್ಶನಕ್ಕೆ ಪಟ್ಟು ಹಿಡಿದಿರುವುದು ನೇಮಕಾತಿ ಪ್ರಕ್ರಿಯೆ ನಿಲ್ಲಲು ಕಾರಣವೇ; | ಕರ್ನಾಟಕ ನಾಗರಿಕ ಸೇವಾ (ನೇರ ನೇಮಕಾತಿ)(ಸಾಮಾನ್ಯ) ನಿಯಮಗಳು, 2021 ರನ್ವಯ 400 ಪಶುವೈದ್ಯರ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಆಯ್ಕೆ ಮಾಡಲು ಕರ್ನಾಟಕ ಲೋಕಸೇವಾ ಆಯೋಗಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿರುತ್ತದೆ. |
| ಈ) | 400 ಪಶು ವೈದ್ಯರ ನೇಮಕಾತಿ ತ್ವರಿತವಾಗಿ ಪೂರ್ಣಗೊಳಿಸಲು ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ? | ಪ್ರಸ್ತುತ ಎಲ್ಲಾ ಅಡೆ-ತಡೆಗಳು ಪೂರ್ಣಗೊಂಡಿದ್ದು, 400 ಪಶುವೈದ್ಯಾಧಿಕಾರಿ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಿಕೊಳ್ಳಲು ಕರ್ನಾಟಕ ಲೋಕಸೇವಾ ಆಯೋಗಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲಾಗಿದ್ದು, ನೇಮಕಾತಿ ಪ್ರಕ್ರಿಯೆ ಚಾಲ್ತಿಯಲ್ಲಿರುತ್ತದೆ. |

**ಪಸಂಮೀ 276 ಸಲೆವಿ 2025**

**(ಕೆ. ವೆಂಕಟೇಶ್)**
ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು